ಮೈಕ್ರೋ ನ್ಯೂಸ್

## ಹಂಪಿ ಉತ್ಸವದಲ್ಲಿ ಸಿಸಿ ಕ್ಯಾಮರ ಕಣ್ಗಾವಲು ಹೆಚ್ಚಳಕ್ಕೆ ಸೂಚನೆ

**ಹಂಪಿ ಟೈಮ್ಸ್ ಹೊಸಪೇಟೆ**

ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಬುಧವಾರ ಸಂಜೆ ಸಭೆ ನಡೆಸಿ ಹಂಪಿ ಉತ್ಸವದ ಸಿದ್ಧತೆಯ ಹಿನ್ನೆಲೆಯಲ್ಲಿ ಆಯಾ ಇಲಾಖೆಯ ಅಧಿಕಾರಿಗಳಿಗೆ ನಾನಾ ಕಾರ್ಯ ಹಂಚಿಕೆ ಮಾಡಿದರು.

ಈಗಾಗಲೇ ಆರಂಭಗೊಂಡ ನಾನಾ ಕಾರ್ಯ ಪ್ರಗತಿಯ ಮಾಹಿತಿ ಪಡೆದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ವೇದಿಕೆಯ ಕಾರ್ಯಕ್ರಮಗಳು, ಶುಚಿತ್ವ ಕಾರ್ಯ, ಆಹಾರ ಸರಬರಾಜು, ಪಾಸುಗಳ ವಿತರಣೆ ಸೇರಿದಂತೆ ನಾನಾ ವಿಷಯಗಳ ಬಗ್ಗೆ ಮಾಹಿತಿ ಪಡೆದರು. ಹಂಪಿ ಉತ್ಸವವು ಮಕ್ಕಳನ್ನು ಸಹ ಒಳಗೊಳ್ಳಬೇಕು ಎಂಬುದು ನಮ್ಮ ಉದ್ದೇಶವಾಗಿದೆ. ಮಕ್ಕಳಿಗೆ ಹಂಪಿಯು ಕನೆಕ್ಟ್ ಆಗಬೇಕು. ಈ ನಿಟ್ಟಿನಲ್ಲಿ ಹಂಪಿ, ಹಂಪಿಯ ಉತ್ಸವ ಅಂದರೇನು ಎಂಬುದರ ಬಗ್ಗೆ ಮಕ್ಕಳಿಗೆ ಸಹ ತಿಳಿಸುವ ಕಾರ್ಯ ಮಾಡಲು ಮತ್ತು ಸಾರ್ವಜನಿಕರಿಗೆ ವಿಶೇಷ ಆಕರ್ಷಣೆಯಾಗಿ ಈ ಬಾರಿ ಉತ್ಸವದಲ್ಲಿ ಶ್ವಾನ ಪ್ರದರ್ಶನ ಮತ್ತು ಎತ್ತಿನ ಪ್ರದರ್ಶನಕ್ಕೆ ಸಹ ಯೋಜಿಸಿದ್ದು ನೋಂದಣಿ ಪ್ರಕ್ರಿಯೆ ಮತ್ತು ಸಿದ್ದತೆ ಮಾಡಬೇಕು ಎಂದು ಪಶುಪಾಲನಾ ಇಲಾಖೆಯ ಉಪ ನಿರ್ದೇಶಕರಿಗೆ ಸೂಚನೆ ನೀಡಿದರು.

ಪ್ರತಿ ವೇದಿಕೆಗೆ ತಲಾ ಒಬ್ಬರು ತಹಸೀಲ್ದಾರ, ತಲಾ ಒಬ್ಬರು ಕಂದಾಯ ನಿರೀಕ್ಷಕರು ಹಾಗೂ ತಲಾ ಮೂವರು ಗ್ರಾಮ ಆಡಳಿತ ಅಧಿಕಾರಿಗಳನ್ನು ನಿಯೋಜಿಸಿ ಕಾರ್ಯಕ್ರಮ ಗಳನ್ನು ಏರ್ಪಾಡು ಮಾಡುವಲ್ಲಿ ಅಚ್ಚುಕಟ್ಟುತನ ಕಾಯ್ದುಕೊಳ್ಳಬೇಕು. ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಆಯಾ ಇಲಾಖಾವಾರು ನಾನಾ ಮಾಹಿತಿಯ ಪ್ರದರ್ಶನಕ್ಕೆ ಮತ್ತು ಹಳೆಯ ಕೃಷಿ ಉಪಕರಣಗಳ ಪ್ರದರ್ಶನಕ್ಕೆ ಏರ್ಪಾಡು ಮಾಡಬೇಕು ಎಂದರು.

ಲಕ್ಷಾಂತರ ಸಂಖ್ಯೆಯಲ್ಲಿ ಜನರು ಉತ್ಸವಕ್ಕೆ ಆಗಮಿಸುತ್ತಾರೆ. ಹೀಗಾಗಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಅಲ್ಲಲ್ಲಿ ಸಿಸಿಟಿವಿ ಅಳವಡಿಸುವುದರ ಬಗ್ಗೆ ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾ ಪೊಲೀಸ್ ಇಲಾಖೆಗೆ ಸೂಚಿಸಿದರು. ಹಂಪಿ ಪರಿಸರದ ಅಲ್ಲಲ್ಲಿ ಇನ್ನು ಸಹ ಅಶುಚಿತ್ವ ಕಾಣುತ್ತಿದೆ. ಉತ್ಸವಕ್ಕೆ ಕೆಲವೇ ದಿನಗಳು ಬಾಕಿ ಇದ್ದು ಸ್ವಚ್ಛತಾ ಕಾರ್ಯವನ್ನು ಯುದ್ಧೋಪಾದಿಯಲ್ಲಿ ನಡೆಸಲು ಕ್ರಮ ವಹಿಸಬೇಕು ಎಂದು ನಗರಸಭೆ ಪೌರಾಯುಕ್ತರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ಸದಾಶಿವ ಪ್ರಭು ಬಿ., ಅಪರ ಜಿಲ್ಲಾಧಿಕಾರಿಗಳಾದ ಅನುರಾಧ ಜಿ., ಸಹಾಯಕ ಆಯುಕ್ತರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಪೂರ್ವಭಾವಿ ಸಭೆಗೆ ಅಧಿಕಾರಿಗಳೇ ಗೈರು: ಆಕ್ರೋಶ

### ತಹಸೀಲ್ದಾರ್ ಎಂ.ರೇಣುಕಾ ಅವರಿಗೆ ಪ್ರಶ್ನೆಗಳ ಸುರಿಮಳೆ। ಅಭಿಪ್ರಾಯಗಳನ್ನು ಕೇಳುವವರೆ ಇಲ್ಲ, ಎಲ್ಲರ ಸಮಯ ಏಕೆ ಹಾಳು ಮಾಡುತ್ತೀರಿ ಎಂದ ಮುಖಂಡರು

**ಹಂಪಿ ಟೈಮ್ಸ್ ಕೂಡ್ಲಿಗಿ**



ಪ್ರತಿ ರಾಷ್ಟ್ರೀಯ ಹಬ್ಬಗಳ ಪೂರ್ವಭಾವಿ ಸಭೆಗಳಲ್ಲಿ ಅಧಿಕಾರಿಗಳ ಗೈರಾಗುವುದು ಎದ್ದು ಕಾಣುತ್ತಿದೆ, ರಾಷ್ಟ್ರೀಯ ಹಬ್ಬಗಳ ಅಧ್ಯಕ್ಷ ತಹಸೀಲ್ದಾರ್ ಈ ಅಧಿಕಾರಿಗಳ ವಿರುದ್ದ ಏನು ಕ್ರಮ ಜರುಗಿಸಿದ್ದಿರಿ ಎಂದು ತಹಸೀಲ್ದಾರ್ ಎಂ.ರೇಣುಕಾ ಅವರನ್ನು ದಲಿತ ಮುಖಂಡ ಬಂಡೆ ರಾಘವೇಂದ್ರ ಪ್ರಶ್ನಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ತಹಸೀಲ್ದಾರ್ ಎಂ.ರೇಣುಕಾ ಅಧ್ಯಕ್ಷತೆಯಲ್ಲಿ ಕರೆದಿದ್ದ ಗಣರಾಜ್ಯೋತ್ಸವದ ಪೂರ್ವಭಾವಿ ಸಭೆಯಲ್ಲಿ ತಾಲೂಕು ಮಟ್ಟದ ಬಹುತೇಕ ಅಧಿಕಾರಿಗಳು ಗೈರಾಗಿದ್ದ ಕುರಿತು ಪ್ರಶ್ನಿಸಿದರು. ರಾಷ್ಟ್ರೀಯ ಹಬ್ಬಗಳ ಆಚರಣೆಗೆ ಇಷ್ಟು ಅಗೌರವ ತೋರಿಸಿದರೆ. ಈ ಅಧಿಕಾರಿಗಳು ಸರ್ಕಾರಿ ಕರ್ತವ್ಯವನ್ನು ಇನ್ನೇಷ್ಟು ಪ್ರಾಮಾಣಿಕತೆಯಿಂದ ಮಾಡಿ ಸಾರ್ವಜನಿಕರ ಸೇವೆಯನ್ನ ಮಾಡುತ್ತಾರೆ ಎಂದು ಸಿಪಿಐ ಜಿಲ್ಲಾ ಕಾರ್ಯದರ್ಶಿ ಎಚ್.ವೀರಣ್ಣ ಹಾಗೂ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಡಿ.ಎಚ್. ದುರುಗೇಶ್ ತಹಸೀಲ್ದಾರ್ ಎಂ.ರೇಣುಕಾ ಹಾಗೂ ತಾಪಂ ಇಓ ವೈ. ರವಿಕುಮಾರ್ ಅವರನ್ನ ತರಾಟೆಗೆ ತೆಗೆದುಕೊಂಡರು. ರಾಷ್ಟ್ರೀಯ ಹಬ್ಬಗಳು ಹಾಗೂ ಸರ್ಕಾರಿ ಜಯಂತಿ ಪೂರ್ವಭಾವಿ ಸಭೆಗಳಲ್ಲಿ ಇಲ್ಲ, ಸಲ್ಲದ ನೆಪವೊಡ್ಡಿ ಗೈರಾಗುವುದು ಇಲ್ಲವೆ ತಾವುಗಳು ಕಚೇರಿಯಲ್ಲಿ ಇಲ್ಲ ಎಂದು ಕಚೇರಿಯ ಡಿ ಗ್ರೂಪ್ ನೌಕರರನ್ನು ಸಭೆಗೆ ಕಳಿಸುತ್ತಾರೆ. ಬೇಕಾಬಿಟ್ಟಿ ಸಭೆ ನಡೆಸುವುದಾದರೆ ಯಾವ ಪುರುಷಾರ್ಥಕ್ಕೆ ಸಂಘ, ಸಂಸ್ಥೆಗಳ ಪದಾಧಿಕಾರಿಗಳು ಬರಬೇಕು ನಿಮಗೆ ಮನಸ್ಸಿಗೆ ಬಂದತೆ ಮಾಡಿಕೊಳ್ಳಿ ಎಂದು ಕಲಾವಿದರ ಕ್ಷೇಮಾಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷ ಬ್ಯಾಳಿ ವಿಜಯಕುಮಾರ್ ಗೌಡ, ಎಚ್.ವೀರಣ್ಣ, ರಾಘವೇಂದ್ರ ಹಾಗೂ ಡಿ.ಎಚ್.ದುರುಗೇಶ್ ಒಕ್ಕೊರಲಿನಿಂದ ತಹಸೀಲ್ದಾರ್ ಎಂ.ರೇಣುಕಾ ಅವರನ್ನು ಪ್ರಶ್ನೆ ಮಾಡಿದರು. ಇದಕ್ಕೆ ಉತ್ತರಿಸಿದ ಅವರು ಪ್ರತಿ ಸಭೆಗೂ ನೋಟಿಸ್ ನೀಡಿ ನಿಗದಿತ ಸಮಯಕ್ಕೆ ಸರಿಯಾಗಿ ಸಭೆಗೆ ಹಾಜರಾಗಲು ತಿಳಿಸಿದರು ಅಧಿಕಾರಿಗಳ ಸಭೆಗೆ ಬರುತ್ತಿಲ್ಲ, ಈ ಬಗ್ಗೆ ನೋಟಿಸ್ ನೀಡಿ ಮಾನ್ಯ ಜಿಲ್ಲಾಧಿಕಾರಿಗಳ ಗಮನಕ್ಕೂ ತರುತ್ತೇವೆ ಎಂದು ತಿಳಿಸಿದರು. ಪ್ರತಿ ಸಭೆಯಲ್ಲಿಯೂ ಇದನ್ನೆ ಹೇಳುತ್ತಿರಿ, ಯಾವುದೇ ಕ್ರಮ ಜರುಗಿಸುವುದಿಲ್ಲ ಈಗಾದರೆ ಮುಂದಿನ ಸಭೆಗಳನ್ನು ಹಾಗೂ ರಾಷ್ಟ್ರೀಯ ಹಬ್ಬಗಳನ್ನ ನಿಮಗೆ ತೋಚಿದಂತೆ ಮಾಡಿಕೊಳ್ಳಿ ನಾವುಗಳು ಬರುವುದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಷ್ಟ್ರೀಯ ಹಬ್ಬಗಳ ಉಪಾಧ್ಯಕ್ಷ ತಾಪಂ ಇಓ ವೈ. ರವಿಕುಮಾರ್ ಸಭೆಯಲ್ಲಿದ್ದ ಎಲ್ಲಾ ಮುಖಂಡರನ್ನು ಸಮಾಧಾನಪಡಿಸಿ ಮುಂದೆ ಈಗಾಗದಂತೆ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡುತ್ತೆವೆ.ಇಂದಿನ ಸಭೆಗೆ ಗೈರಾದ ಅಧಿಕಾರಿಗಳ ವಿರುದ್ದ ಕ್ರಮ ಜರುಗಿಸಲು ಜಿಲ್ಲಾಧಿಕಾರಿಗಳ ಗಮನಕ್ಕೆ ತರುತ್ತೆವೆ ಎಂದು ಸಮಜಾಯಿಷಿ ನೀಡಿದರು. ಇದೇ 19 ರಂದು ಶುಕ್ರವಾರ ಬೆಳಿಗ್ಗೆ 11 ಕ್ಕೆ ಪೂರ್ವಭಾವಿ ಸಭೆ ನಡೆಸಲು ತೀರ್ಮಾನಿಸಿದರು. ಬಿಇಓ ಪದ್ಮನಾಭ ಕರಣಂ, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಪಿ.ಶಿವರಾಜ್, ಮುಖಂಡರಾದ ಹಿರೇಕುಂಬಳಗುಂಟೆ ಉಮೇಶ್, ವಿಭೂತಿ ವೀರಣ್ಣ, ನರೇಂದ್ರ ಸ್ವಾಮಿ, ತಿಪ್ಪೇಸ್ವಾಮಿ, ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಜ.28 ರಂದು ಶೋಷಿತ ಸಮುದಾಯಗಳ ರಾಜ್ಯ ಸಮಾವೇಶ

### ಒಕ್ಕೂಟದ ಅಧ್ಯಕ್ಷ ಕೆ.ಎಂ.ರಾಮಚಂದ್ರಪ್ಪ ಕರೆ । ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಿ । ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ

**ಹಂಪಿ ಟೈಮ್ಸ್ ಹೊಸಪೇಟೆ:**



ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ, ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ (ರಿ) ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದ ಗೌತಮ್ ಬುದ್ದ ಫಂಕ್ಷನ್ ಹಾಲ್ ನಲ್ಲಿ ಕರ್ನಾಟಕ ಶೋಷಿತರ ಜಾಗೃತಿಗಾಗಿ ರಾಜ್ಯ ಸಮಾವೇಶದ, ವಿಜಯನಗರ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ ಜರುಗಿತು .


ಸಭೆಯಲ್ಲಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಅಧ್ಯಕ್ಷ ಕೆ.ಎಂ.ರಾಮಚಂದ್ರಪ್ಪ ಮಾತನಾಡಿ, ಸುಪ್ರೀಂ ಕೋರ್ಟ್ ಹಿಂದುಳಿದ ವರ್ಗಗಳ ಶಾಶ್ವತ ಆಯೋಗವನ್ನು ರಚಿಸಿ ಕೊಳ್ಳುವಂತೆ ರಾಜ್ಯಗಳಿಗೆ ನಿರ್ದೇಶನ ನೀಡಿದೆ. ಆ ಪ್ರಕಾರ ಎಲ್ಲಾ ರಾಜ್ಯಗಳು ಆಯೋಗ ರಚಿಸಿ ಎಲ್ಲಾ ಜಾತಿಗಳ ಸಮಾಜಿಕ , ಶೈಕ್ಷಣಿಕ, ಆರ್ಥಿಕ ಹಿಂದುಳಿದಿರುವಿಕೆಯನ್ನು ಗುರುತಿಸಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಈ ಅಧ್ಯಯನಗಳನ್ನು ಪರಿಶೀಲಿಸಬೇಕು. ಎಲ್ಲಾ ಜಾತಿಯವರಿಗೆ ಸಮಾನ ಅವಕಾಶಗಳನ್ನು ಕಲ್ಪಿಸಬೇಕು ಎಂಬುದು ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಒತ್ತಾಯವಾಗಿದೆ ಎಂದರು.

ಹೆಚ್.ಕಾಂತರಾಜು ವರದಿಯನ್ನು ರಾಜ್ಯ ಸರ್ಕಾರವು ಈ ಕೂಡಲೇ ಸ್ವೀಕರಿಸಿ ಸಾರ್ವಜನಿಕರಿಗೆ ಚರ್ಚೆಗೆ ಬಿಟ್ಟು ವರದಿಯನ್ನು ಅಂಗೀಕರಿಸಿ ಜಾರಿಗೊಳಿಸಬೇಕು. ಕೇಂದ್ರ ಸರ್ಕಾರವು ಜಾತಿವಾರು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಮಾಡಿಸಬೇಕು, ಖಾಸಗಿ ಕ್ಷೇತ್ರಕ್ಕೂ ಮೀಸಲಾತಿ ವಿಸ್ತರಣೆ ಮಾಡಬೇಕೆನ್ನುವ ಬಗ್ಗೆ ಸಮಾವೇಶದ ಮೂಲಕ ಒತ್ತಾಯಿಸ ಬೇಕಾಗಿದೆ, ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಶೋಷಿತ ಸಮುದಾಯ ಗಳ ಸಚಿವರು, ವಿವಿಧ ಸಮುದಾಯಗಳ ಮುಖಂಡರು ಭಾಗವಹಿಸಲು ಆಹ್ವಾನ ನೀಡಲಾಗಿದೆ, ವಿಜಯನಗರ ಜಿಲ್ಲೆಯ ಎಲ್ಲಾ ತಾಲೂಕುಗಳಿಂದ ಚಿತ್ರದುರ್ಗದಲ್ಲಿ ಜರುಗಲಿರುವ ಸಮಾವೇಶದಲ್ಲಿ ಶೋಷಿತ ಸಮುದಾಯಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕರೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಪ್ರದೇಶ ಕುರುಬರ ಸಂಘದ ರಾಜ್ಯಾಧ್ಯಕ್ಷ ಎಂ.ವೀರಣ್ಣ, ಆದರ್ಶ ಯಲ್ಲಪ್ಪ, ಎಣ್ಣೆ ವೆಂಕಟರಾಮಯ್ಯ, ದೊಡ್ಡಬಳ್ಳಾಪುರ ಕೃಷ್ಣಮೂರ್ತಿ, ರಾಜ್ಯ ಯುವ ಅಧ್ಯಕ್ಷ ಭಗವಂತ ರಾವ್ ಪಾಟೀಲ್, ಮಾಜಿ ಅಧ್ಯಕ್ಷ ಸುಬ್ರಹ್ಮಣ್ಯ, ಕೋಡಿಹಳ್ಳಿ ಭೀಮಪ್ಪ, ಕೆ.ಪರಶುರಾಮಪ್ಪ ಮಾಜಿ ಜಿ.ಪಂ. ಸದಸ್ಯ ಕೆ. ಎಂ.ಹಾಲಪ್ಪ,ಎಲ್.ಸಿದ್ದನಗೌಡ, ರಾಮಚಂದ್ರ ಗೌಡ, ಬಾಲೇಸಾಬ್, ಡಿ.ವೆಂಕಟರಮಣ, ನಿಂಬಗಲ್ ರಾಮಕೃಷ್ಣ, ಮಂಜುನಾಥ ಯಾದವ್, ಕೆ ರವಿಕುಮಾರ್, ಬಣ್ಣದಮನೆ ಸೋಮಶೇಖರ್, ಸೇರಿದಂತೆ ಇತರರು ಇದ್ದರು.

## ರಂಭಾಪುರಿ ಶ್ರೀಗಳ ಪಲ್ಲಕ್ಕಿ ಉತ್ಸವ





ಹಂಪಿ ಟೈಮ್ಸ್ ದಿನ ಪತ್ರಿಕೆಗಾಗಿ ನಿಮ್ಮ ಸಮೀಪದ ಪತ್ರಿಕಾ ಏಜೆಂಟರನ್ನು ಸಂಪರ್ಕಿಸಿರಿ
ಮಾಹಿತಿಗಾಗಿ: 9448633038

# ಕೂಸಿನಮನೆ ಸ್ಥಾಪನೆ ರಾಜ್ಯಕ್ಕೆ ಮಾದರಿಯಾಗಲಿ

### ಜಿ.ಪಂ ಸಿಇಓ ಬಿ.ಸದಾಶಿವ ಪ್ರಭು ಹೇಳಿಕೆ । ಮೂರನೇ ಹಂತದ ತರಬೇತಿ ಕಾರ್ಯಾಗಾರಕ್ಕೆ ಚಾಲನೆ

**ಹಂಪಿ ಟೈಮ್ಸ್ ಹರಪನಹಳ್ಳಿ**

ವಿಜಯನಗರ ಜಿಲ್ಲೆಯಲ್ಲಿ ಆರು ತಾಲೂಕುಗಳ ಪೈಕಿ ಹೆಚ್ಚು ಕೂಸಿನ ಮನೆ ಆರಂಭ ಮಾಡಿರುವುದು ಹರಪನಹಳ್ಳಿ ತಾಲೂಕು ಮಾತ್ರವಾಗಿದ್ದು, ಬಾಕಿ ಉಳಿದ 27 ಕೂಸಿನ ಮನೆಗಳನ್ನು ಅತೀ ಶೀಘ್ರವಾಗಿ ಪ್ರಾರಂಭಿಸಬೇಕು ಎಂದು ವಿಜಯನಗರ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಸದಾಶಿವ ಪ್ರಭು ತಿಳಿಸಿದರು.



ಇಲ್ಲಿನ ತಾಲೂಕು ಪಂಚಾಯಿತಿ ಆವರಣದಲ್ಲಿರುವ ರಾಜೀವಗಾಂಧಿ ಸಭಾಂಗಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಆಶ್ರಯದಲ್ಲಿ ಕೂಸಿನ ಮನೆಯ ಮಕ್ಕಳನ್ನು ಆರೈಕೆ ಮಾಡುವವರಿಗೆ ಮಂಗಳವಾರ ಹಮ್ಮಿಕೊಂಡಿದ್ದ ಮೂರನೇ ಹಂತದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕೂಸಿನಮನೆ ಕಾರ್ಯಕ್ರಮ ನಡೆಯುತ್ತಿದ್ದು, ಇದು ಬಜೆಟ್‌ನಲ್ಲೂ ಘೋಷಣೆಯಾಗಿರುವ ಯೋಜನೆಯಾಗಿದೆ. ಹೀಗಾಗಿ ಈ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸುವುದು ಪ್ರತಿ ಗ್ರಾಪಂ ಅಧಿಕಾರಿಗಳು, ನೋಡಲ್ ಅಧಿಕಾರಿಗಳು ಹಾಗೂ ತಾಪಂನ ಕಾರ್ಯನಿರ್ವಾಹಕಅಧಿಕಾರಿಗಳಜವಾಬ್ದಾರಿಯಾಗಿದೆ. ಕೂಸಿನ ವಿಷಯದಲ್ಲಿ ಹೆಚ್ಚಿನ ಕಾಳಜಿ ವಹಿಸಿ ಶೀಘ್ರವಾಗಿ ಎಲ್ಲೆಡೆ ಪ್ರಾರಂಭಿಸಬೇಕು. ಇಡೀ ರಾಜ್ಯಕ್ಕೆ ವಿಜಯನಗರ ಜಿಲ್ಲೆ ಮೊದಲ ಸ್ಥಾನದಲ್ಲಿ ಇರಬೇಕು. ತರಬೇತಿ ಪಡೆಯುವ ಆರೈಕೆದಾರರೂ ಕೂಡ ಬಹಳ ಗಮನವಿಟ್ಟು, ಶ್ರದ್ಧೆ ಹಾಗೂ ಉತ್ಸಾಹದಿಂದ ತರಬೇತಿ ಪಡೆಯಬೇಕು ಎಂದರು.

ಎಲ್ಲ ಶಿಬಿರಾರ್ಥಿಗಳು ಸರಿಯಾದ ರೀತಿಯಲ್ಲಿ ತರಬೇತಿ ಪಡೆಯಬೇಕು. ಶಿಬಿರಾರ್ಥಿಗಳು ಕೂಸಿನ ಮನೆಗೆ ಹೋದಾಗ ಯಾವುದೇ ನಿರ್ಲಕ್ಷ್ಯ ತೋರದೆ 6 ತಿಂಗಳಿಂದ 3 ವರ್ಷದೊಳಗಿನ ಮಕ್ಕಳನ್ನು ಉತ್ತಮವಾಗಿ ಆರೈಕೆ ಮಾಡಬೇಕು. ಮಕ್ಕಳ ಬೌದ್ದಿಕತೆ, ಮಾನಸಿಕ, ಆರೋಗ್ಯಯುತವಾಗಿ ನೋಡಿಕೊಳ್ಳುವುದು ಆರೈಕೆದಾರರ ಮೇಲೆ ಇರುತ್ತದೆ. ಈ ನಿಟ್ಟಿನಲ್ಲಿ ತರಬೇತಿ ಕಾರ್ಯಾಗಾರ ಹಮ್ಮಿಕೊಂಡಿದ್ದು, ಏಳು ದಿನಗಳವರೆಗೆ ಕಾರ್ಯಾಗಾರ ನಡೆಯುತ್ತದೆ. ಮಕ್ಕಳ ವಿಷಯದಲ್ಲಿ ಸೂಕ್ಷ್ಮತೆ, ಕಾಳಜಿಯನ್ನು ವಹಿಸಿ ಸಣ್ಣ ಸಣ್ಣ ವಿಷಯಗಳನ್ನು ಬಹಳ ಗಮನವಿಟ್ಟು ಆಲಿಸಬೇಕು. ಇಲ್ಲಿ ನೀಡುವ ತರಬೇತಿಯೇ ನೀವು ಮಾಡುವ ಕೆಲಸದಲ್ಲಿಯೂ ಇರುತ್ತದೆ. ಇಲ್ಲಿ ಎಲ್ಲವನ್ನೂ ತಿಳಿಸಲಾಗುತ್ತದೆ. ಯಾರೂ ಬೇಜವಾಬ್ದಾರಿ ತೋರಬಾರದು. 37 ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸುಸಜ್ಜಿತ ಕಟ್ಟಡಗಳನ್ನು ಆಯ್ಕೆ ಮಾಡಲಾಗಿದ್ದು, ಈಗಾಗಲೇ ತಾಲೂಕಿನಲ್ಲಿ 10 ಕೂಸಿನ ಮನೆ ಆರಂಭಿಸಲಾಗಿದೆ. ಈ ಹಿಂದೆ ತರಬೇತಿ ಪಡೆದಿರುವವರೇ ಆರೈಕೆದಾರರಾಗಿದ್ದಾರೆ. ಅವರ ಅವಧಿ ಮುಗಿದ ಬಳಿಕ ನಿಮ್ಮ ಸರದಿ ಬಂದಾಗ ನೀವೂ ಕೂಡ ಮಕ್ಕಳನ್ನು ಉತ್ತಮ ರೀತಿಯಲ್ಲಿ ಆರೈಕೆ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ(ಪಂ. ರಾಜ್) ವೀರಣ್ಣ ಲಕ್ಕಣ್ಣನವರ್, ತಾಲೂಕು ನರೇಗಾ ಸಹಾಯಕ ನಿರ್ದೇಶಕ ಯು.ಎಚ್.ಸೋಮಶೇಖರ್, ತಾಪಂ ವ್ಯವಸ್ಥಾಪಕ ದಾದ ಖಲೀಲ್, ಐಇಸಿ ಸಂಯೋಜಕ ಕೆ.ವಸಿಗೇರಪ್ಪ ಚಾಗನೂರು, ಮೊಬೈಲ್ ಕ್ರಚಸ್ ಸಂಸ್ಥೆಯ ತರಬೇತುದಾರರಾದ ಜಗದೀಶ್, ಶಶಿಧರ್, ರಜನಿ, ಶೋಭಾ ಮತ್ತಿತರರು ಇದ್ದರು.

ಹರಪನಹಳ್ಳಿ ತಾಲೂಕು ಪಂಚಾಯಿತಿಯಲ್ಲಿ ಕೂಸಿನ ಮನೆಯ ಮಕ್ಕಳನ್ನು ಆರೈಕೆ ಮಾಡುವವರಿಗೆ ಮೂರನೇ ಹಂತದ ತರಬೇತಿ ಕಾರ್ಯಾಗಾರವನ್ನು ಮಂಗಳವಾರ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಸದಾಶಿವ ಪ್ರಭು ಉದ್ಘಾಟಿಸಿದರು. ಸಹಾಯಕ ನಿರ್ದೇಶಕ(ಪಂ.ರಾಜ್) ವೀರಣ್ಣ ಲಕ್ಕಣ್ಣನವರ್, ತಾಲೂಕು ನರೇಗಾ ಸಹಾಯಕ ನಿರ್ದೇಶಕ ಯು.ಎಚ್.ಸೋಮಶೇಖರ್, ತಾಪಂ ವ್ಯವಸ್ಥಾಪಕ ದಾದ ಖಲೀಲ್, ಮೊಬೈಲ್ ಕ್ರಚಸ್ ಸಂಸ್ಥೆಯ ತರಬೇತುದಾರರಾದ ಜಗದೀಶ್, ಶಶಿಧರ್, ರಜನಿ, ಶೋಭಾ ಇತರರಿದ್ದರು.

> ಕೂಸಿನ ಮನೆ ತರಬೇತಿಯಲ್ಲಿ ಪಾಲ್ಗೊಂಡಿರುವವರು ಎಲ್ಲರೂ ಹಳ್ಳಿಗಳಿಂದ ಬಂದವರು ಜತೆಗೆ ವಿದ್ಯಾವಂತರೆ. ಹೀಗಾಗಿ ಮಕ್ಕಳನ್ನು ಆರೈಕೆ ಮಾಡುವಾಗ ತಮ್ಮ ಮಕ್ಕಳಂತೆ ನೋಡಿಕೊಂಡು ಸರ್ಕಾರ ನೀಡುವ ಆಹಾರ ನೀಡಿ ಪೌಷ್ಟಿಕವಾಗಿ ಎಲ್ಲ ಮಕ್ಕಳನ್ನು ಬೆಳೆಸಬೇಕು. ವಿದ್ಯಾವಂತರನ್ನಾಗಿ ಮಾಡಬೇಕು. ಇದೇ ಸರ್ಕಾರದ ಉದ್ದೇಶವೂ ಆಗಿದೆ.
>
> **– ಬಿ.ಸದಾಶಿವ ಪ್ರಭು,**
> ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
> ಜಿಪಂ, ವಿಜಯನಗರ




Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA